ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ ನ್ಯಾಯಾಲಯ, ಮೂಡಿಗೆರೆ

ಸಿ.ಸಿ. ಸಂಖ್ಯೆಃ **2290/2024**

ಪಿರ್ಯಾದಿ : ಶ್ರೀ ನಂದೀಶ್.ಕೆ.ಹೆಚ್,
ವಯಸ್ಸು ಸುಮಾರು 51 ವರ್ಷ,
ಬಿನ್ ಹಾಲೇಗೌಡ,
ವಾಸಃ ಕೂಳೂರು ಗ್ರಾಮ,
ಬೆಟ್ಟಗೆರೆ ಅಂಚೆ, ಮೂಡಿಗೆರೆ ತಾಲ್ಲೂಕು.

ವಿರುದ್ಧ

ಆರೋಪಿ : ಶ್ರೀಮತಿ ರುಕ್ಮಿಣಿ,
ವಯಸ್ಸು ಸುಮಾರು 32 ವರ್ಷ,
ಕೋಂ ಸುರೇಂದ್ರ, ವಾಸಃ ಬೆಟ್ಟಗೆರೆ ಅಂಚೆ,
ಬಣಕಲ್ ಹೋಬಳಿ, ಮೂಡಿಗೆರೆ ತಾಲ್ಲೂಕು.

ಆಪಾದನೆಯ ಸಾರಾಂಶ

ಶ್ರೀ ವಿಶ್ವನಾಥ್ ಎ., ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ ನ್ಯಾಯಾಲಯ, ಮೂಡಿಗೆರೆ, ಆದ ನಾನು, ಆರೋಪಿಯಾದ ನಿಮ್ಮ ಮೇಲೆ ಮಾಡುವ ಆಪಾದನೆ ಏನೆಂದರೆಃ-

ಆರೋಪಿಯಾದ ನೀವು ಪಿರ್ಯಾದುದಾರರನ್ನು ಸಂಪರ್ಕಿಸಿ, ನಿಮ್ಮ ತುರ್ತು ಹಣದ ಅವಶ್ಯಕತೆಗಳಿಗಾಗಿ ಅವರಿಂದ 60,000/- ರೂಪಾಯಿಗಳನ್ನು ಸಾಲವಾಗಿ ಪಡೆದಿದ್ದು, ಸದರಿ ಹಣದ ಮರುಪಾವತಿಗಾಗಿ ನಿಮ್ಮ ಖಾತೆ ಹೊಂದಿರುವ ಕೆನರಾ ಬ್ಯಾಂಕ್, ಮೂಡಿಗೆರೆ ಶಾಖೆಯ ಚೆಕ್ ಸಂಖ್ಯೆಃ 265844, ದಿನಾಂಕ 24.09.2024, ರೂ.60,000/- ಎಂದು ನಮೂದಿಸಿ ನೀಡಿದ್ದು, ಸದರಿ ಚೆಕ್ ಅನ್ನು ಫಿರ್ಯಾದಿಯು ಕರ್ನಾಟಕ ಬ್ಯಾಂಕ್, ಮೂಡಿಗೆರೆ ಶಾಖೆಯಲ್ಲಿ ಜಮೆಗಾಗಿ ಸಲ್ಲಿಸಿದಾಗ, ನಿಮ್ಮ ಖಾತೆಯಲ್ಲಿ ಸಾಕಷ್ಟು ಹಣವಿಲ್ಲ (Funds Insufficient) ಎಂದು ಹಿಂಬರಹ ನೀಡಿರುತ್ತಾರೆ. ಕಾರಣ, ಫಿರ್ಯಾದಿಯು ದಿನಾಂಕ 23.10.2024 ರಂದು ನೋಟೀಸ್ ಮೂಲಕ ಆರೋಪಿಯಾದ ನಿಮಗೆ ಸದರಿ ವಿಚಾರವನ್ನು ತಿಳಿಸಿದರೂ ಸಹ ನೀವು ಹಣವನ್ನು ವಾಪಸ್ ಮಾಡಿರುವುದಿಲ್ಲ. ಈ ರೀತ್ಯಾ ನೀವು ನೆಗೋಷಿಬಲ್ ಇನ್ಸ್ಟ್ರುಮೆಂಟ್ ಆಕ್ಟ್ ಕಲಂ **138** ರಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಮಾಡಿರುವಿರಿ ಎಂದು ಆಪಾದಿಸಲಾಗಿದೆ?

ಪ್ರಃ 1. ಈಗ ಮೇಲೆ ಓದಿ ಹೇಳಿದ ಆಪಾದನೆಯನ್ನು ಕೇಳಿದ್ದೀರಾ? ಅದು ನಿಮಗೆ ಅರ್ಥವಾಯಿತೇ?

ಆರೋಪಿಯ ಉತ್ತರಃ

ಪ್ರಃ  2. ನೀವು ಆಪಾದನೆಯನ್ನು ಒಪ್ಪಿಕೊಳ್ಳುವಿರೋ ಅಥವಾ ವಿಚಾರಣೆಯಾಗಬೇಕೋ?

ಆರೋಪಿಯ ಉತ್ತರಃ

*(ದಿನಾಂಕ 25.10.2025 ರಂದು ಆಪಾದನೆಯ ಸಾರಾಂಶವನ್ನು ಆರೋಪಿಗೆ ತಿಳಿಯುವ ಭಾಷೆಯಲ್ಲಿ ಓದಿ, ಅವರ ಹೇಳಿಕೆಯನ್ನು ನನ್ನ ಸಮಕ್ಷಮದಲ್ಲಿ ಬರೆದುಕೊಳ್ಳಲಾಯಿತು. ಅದು ಸತ್ಯವಾಗಿಯೂ ಮತ್ತು ಸರಿಯಾಗಿಯೂ ಇರುತ್ತದೆ ಅಂತಾ ಪ್ರಮಾಣೀಕರಿಸುತ್ತೇನೆ)*

**Sd/-**

ಮೂಡಿಗೆರೆ
ದಿನಾಂಕಃ 25.10.2025

ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು
**ಜೆ.ಎಂ.ಎಫ್.ಸಿ, ಮೂಡಿಗೆರೆ.**